## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ ಇವರ ಸ್ವಂತ ನಿವಾಸವನ್ನು ಅಧಿಕೃತ ನಿವಾಸವೆಂದು ಘೋಷಿಸುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಪಿಡಿ 48 ಪಿಎಸ್ ಡಿ2014 ದಿನಾಂಕ:13.06.2014
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 78 ಶಿಸನೇ 2014 ದಿನಾಂಕ:16.06.2014
3. ಟಿಪ್ಪಣಿ ಸಂಖ್ಯೆ: ಕೆಎಸ್‌ಪಿಬಿ/ಡಿವೈಸಿ-01/116/015 ದಿನಾಂಕ:13.5.2015

ಪ್ರಸ್ತಾವನೆ:

ಶ್ರೀ ಸಿ.ಎಂ.ಇಬ್ರಾಹಿಂ, ಮಾಜಿ ಸಚಿವರು ಇವರನ್ನು ಕರ್ನಾಟಕ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ನೇಮಿಸಲಾಗಿದೆ.

ಶ್ರೀ ಸಿ.ಎಂ.ಇಬ್ರಾಹಿಂ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಯೋಜನಾ ಮಂಡಳಿ ಇವರಿಗೆ ಮುಂದಿನ ಆದೇಶದವರೆಗೆ ಸಂಪುಟ ದರ್ಜೆಯ ಸಚಿವರ ಸ್ಥಾನಮಾನವನ್ನು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ನೀಡಲಾಗಿದೆ.

ಶ್ರೀ ಸಿ.ಎಂ.ಇಬ್ರಾಹಿಂ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಯೋಜನಾ ಮಂಡಳಿ ಇವರು ತಾವು ವಾಸಿಸುತ್ತಿರುವ ಸ್ವಂತ ನಿವಾಸ - ನಂ.81, ಬೆನ್‌ಸನ್ ಅಡ್ಡರಸ್ತೆ, ಬೆನ್‌ಸನ್ ಟೌನ್, ಬೆಂಗಳೂರು-560 046 ನ್ನು ಅಧಿಕೃತ ನಿವಾಸವೆಂದು ಘೋಷಿಸಿ ಆದೇಶ ಹೊರಡಿಸುವಂತೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 36 ಎಸ್‌ಪಿಬಿ 2015, ಬೆಂಗಳೂರು ದಿನಾಂಕ: 21.08.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಿ.ಎಂ.ಇಬ್ರಾಹಿಂ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಯೋಜನಾ ಮಂಡಳಿ ಇವರು ವಾಸಿಸುತ್ತಿರುವ ಸ್ವಂತ ನಿವಾಸ - "ನಂ.81, ಬೆನ್‌ಸನ್ ಅಡ್ಡರಸ್ತೆ, ಬೆನ್‌ಸನ್ ಟೌನ್, ಬೆಂಗಳೂರು-560 046" ನ್ನು ಅಧಿಕೃತ ನಿವಾಸವೆಂದು ಘೋಷಿಸಿದೆ.

ಈ ಆದೇಶವನ್ನು ಪತ್ರ ಸಂಖ್ಯೆ: ಸಿಆಸುಇ 113 ಶಿಸನೇ 2015 ದಿನಾಂಕ 17.8.2015ರಲ್ಲಿ ಸಿ.ಆ.ಸು.ಇಲಾಖೆ (ರಾಜ್ಯ ಶಿಷ್ಟಾಚಾರ) ಯು ನೀಡಿರುವ ಸಹಮತಿ ಮೇರೆಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆ ಇವರ ಅನುಮೋದನೆಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್-3)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಗ್ರೇಡ್-1/ಗ್ರೇಡ್-2, ಯೋಜನೆ ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆ ಬಹುಮಹಡಿ ಕಟ್ಟಡ ಬೆಂಗಳೂರು-01.
5. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇ. (ರಾಜ್ಯ ಶಿಷ್ಟಾಚಾರ), ವಿಧಾನಸೌಧ, ಬೆಂಗಳೂರು
6. ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್ 1&2)ಯೋಜನೆ ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆ ಬಹುಮಹಡಿ ಕಟ್ಟಡ ಬೆಂಗಳೂರು-01.
7. ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿರವರ ಆಪ್ತ ಶಾಖೆ, ವಿಕಾಸಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ